# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ವೀರಣ್ಣ ಜಿ ತುರಮರಿ, ಹಿಂದಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ(ಪ್ರಸ್ತುತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ) ಹಾಗೂ ಶ್ರೀ ಮುಕ್ಕಣ್ಣ ಎಂ ಕರಿಗಾರ, ಹಿಂದಿನ ಉಪ ಯೋಜನಾ ವ್ಯವಸ್ಥಾಪಕರು, ಜಲ ನಿರ್ಮಲ ಯೋಜನೆ, ಜಿಲ್ಲಾ ನೆರವು ಘಟಕ, ಉತ್ತರ ಕನ್ನಡ (ಪ್ರಸ್ತುತ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು) ಇವರುಗಳ ವಿರುದ್ಧದ ಇಲಾಖಾ ವಿಚಾರಣೆ

ಓದಲಾಗಿದೆ:- 1. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಗ್ರಾಅಪ/ಕನೀಸಂ//08/2008, ದಿನಾಂಕ:5.6.2013

2. ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ:31.08.2013

3. ಶ್ರೀ ಮುಕ್ಕಣ್ಣ ಎಂ ಕರಿಗಾರ, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ರವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ:18.09.2013

4. ಶ್ರೀ ವೀರಣ್ಣ ಜಿ ತುರಮರಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ ರವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ:16.11.2013

****

**ಪ್ರಸ್ತಾವನೆ:**

ಉತ್ತರ ಕನ್ನಡ ಜಿಲ್ಲಾ ಪಂಚಾಯತ್‌ನಲ್ಲಿ ಈ ಹಿಂದೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಹಾಗೂ ಯೋಜನಾ ವ್ಯವಸ್ಥಾಪಕರಾಗಿ ಕರ್ತವ್ಯನಿರ್ವಹಿಸುತ್ತಿದ್ದ ಶ್ರೀ ವೀರಣ್ಣ ಜಿ ತುರಮರಿ (ಪ್ರಸ್ತುತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ) ಹಾಗೂ ಈ ಹಿಂದೆ ಉಪ ಯೋಜನಾ ವ್ಯವಸ್ಥಾಪಕರು, ಜಲ ನಿರ್ಮಲ ಯೋಜನೆ, ಜಿಲ್ಲಾ ನೆರವು ಘಟಕ, ಉತ್ತರ ಕನ್ನಡ ಇಲ್ಲಿ ಕರ್ತವ್ಯನಿರ್ವಹಿಸುತ್ತಿದ್ದ ಶ್ರೀ ಮುಕ್ಕಣ್ಣ ಎಂ ಕರಿಗಾರ, (ಪ್ರಸ್ತುತ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು) ಇವರುಗಳು ವಿಶ್ವ ಬ್ಯಾಂಕ್ ನೆರವಿನ ಜಲ ನಿರ್ಮಲ ಯೋಜನೆಯಡಿಯಲ್ಲಿ ಸರ್ಕಾರದ ನಿಯಮಗಳ ವಿರುದ್ಧವಾಗಿ ಹಲವಾರು ಲೋಪದೋಷಗಳನ್ನು ಎಸಗಿದ್ದು, ಈ ಸಂಬಂಧ ಸದರಿ ಇಬ್ಬರು ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲು ಮೇಲೆ(1)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ ಇವರು ಶಿಫಾರಸ್ಸುಮಾಡುತ್ತಾ, ಆರೋಪಿತ ಅಧಿಕಾರಿಗಳ ವಿರುದ್ಧ ದೋಷಾರೋಪಣ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಇದನ್ನಾಧರಿಸಿ ಸದರಿ ಇಬ್ಬರು ಅಧಿಕಾರಿಗಳಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ

ನಿಯಮಾವಳಿಗಳು 1957ರ ನಿಯಮ 11 ರ ಪ್ರಕಾರ ಮೇಲೆ (2)ರಲ್ಲಿ ಓದಲಾದ ದಿನಾಂಕ:31.08.2013ರಂದು ಕಾರಣ ಕೇಳುವ ನೋಟೀಸ್ಸಿನೊಂದಿಗೆ ಅನುಬಂಧ 1-4ರನ್ನು ಜಾರಿಮಾಡಿ ರಕ್ಷಣಾ ಹೇಳಿಕೆಯನ್ನು ಸಲ್ಲಿಸಲು ಸೂಚಿಸಲಾಗಿತ್ತು. ಸದರಿ ಅಧಿಕಾರಿಗಳು ಮೇಲೆ 3, ಮತ್ತು 4 ರಲ್ಲಿ ಓದಲಾದ ದಿನಾಂಕಗಳಂದು, ಅವರ ಲಿಖಿತ ಹೇಳಿಕೆಯನ್ನು ಸಲ್ಲಿಸಿ ಅವರ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈಬಿಡುವಂತೆ ಕೋರಿರುತ್ತಾರೆ. ಸದರಿ ಇಬ್ಬರು ಜನ ಅಧಿಕಾರಿಗಳು ನೀಡಿರುವ ರಕ್ಷಣಾ ಹೇಳಿಕೆಯನ್ನು ಪರಿಶೀಲಿಸಿದ್ದು, ಅಧಿಕಾರಿಗಳು ನೀಡಿರುವ ಉತ್ತರವು ಸಮರ್ಥನೀಯವಾಗಿಲ್ಲದೇ ಇರುವುದರಿಂದ, ಆರೋಪಗಳ ಸತ್ಯಾಸತ್ಯೆಯನ್ನು ತಿಳಿಯಲು ವಿವರವಾದ ವಿಚಾರಣೆಯನ್ನು ನಡೆಸಲು, ವಿಚಾರಣಾಧಿಕಾರಿ ಹಾಗೂ ಮಂಡನಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 96 ವಿಸೇಜ 2013 ಬೆಂಗಳೂರು**
**ದಿನಾಂಕ:24-04-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ವಿ.ಜಿ. ತುರಮರಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಗದಗ ಮತ್ತು ಶ್ರೀ ಮುಕ್ಕಣ್ಣ ಕರಿಗಾರ, ಉಪ ಕಾರ್ಯದರ್ಶಿ ಜಿಲ್ಲಾ ಪಂಚಾಯತ್ ರಾಯಚೂರು ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11ರ ಪ್ರಕಾರ ಮತ್ತು ಸದರಿ ನಿಯಮಗಳ ನಿಯಮ 13 ರಡಿ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ -11 (2) ರ ಪ್ರಕಾರ ಶ್ರೀ ಫ.ಸಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮಾವಳಿಗಳ ನಿಯಮ-11(5)(ಸಿ)ರ ಪ್ರಕಾರ ಉಪ ಕಾರ್ಯದರ್ಶಿ, (ಅಭಿವೃದ್ಧಿ) ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಇವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ), ನಿಯಮಾವಳಿಗಳು-1957ರ ನಿಯಮ-11ರಲ್ಲಿ ನಿಗಧಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಜರುಗಿಸಿ ವಿಚಾರಣಾ ವರದಿಯನ್ನು 4 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
3) ನಿರ್ದೇಶಕರು, ಕರ್ನಾಟಕ ರಾಜ್ಯ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ/ಗದಗ
5) ಶ್ರೀ ಹ.ಸಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಧಾರವಾಡ.
6) ಜಿಲ್ಲಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ & ಗದಗ ಜಿಲ್ಲೆ.
7) ಉಪ ಕಾರ್ಯದರ್ಶಿ.(ಅಭಿವೃದ್ಧಿ) ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಜಿಲ್ಲೆ, ಕಾರವಾರ

ಪ್ರತಿ ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.